ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಶ್ರೀ ಬಿ.ಬಿ.ಶೀರ್ಥ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತ್ ಖಾನಾಪುರ, ಮತ್ತು ಮತ್ತಿತರರ ವಿರುದ್ಧ ಇಲಾಖಾ ವಿಚಾರಣೆಯನ್ನು ನಡೆಸಲು ಪ್ರಕರಣವನ್ನು ಮಾನ್ಯ ಲೋಕಾಯುಕ್ತರವರಿಗೆ ವಹಿಸುವ ಕುರಿತು.

**ಓದಲಾಗಿದೆ:** 1. ಮಾನ್ಯ ಉಪಲೋಕಾಯುಕ್ತರು, ಇವರು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಕಲಂ 12(3) ರಡಿ ಸಲ್ಲಿಸಿರುವ ವರದಿಸಂಖ್ಯೆ:ಕಂಪ್ಲೇಂಟ್/ ಉಪಲೋಕ್/ಬಿಜಿಎಂ/128/2011/ಎಆರ್‌ಇ-5, ದಿನಾಂಕ:13.10.2016

2. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಇವರ ಅ.ಸ.ಪತ್ರ ಸಂಖ್ಯೆ:ಕಂಪ್ಲೇಂಟ್/ಉಪಲೋಕ್/ಬಿಜಿಎಂ/128/2011/ಎಆರ್‌ಇ-5, ದಿನಾಂಕ: 17.10.2016.

****

**ಪ್ರಸ್ತಾವನೆ:**

ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಇವರು ಮೇಲೆ ಓದಲಾದ(2)ರಲ್ಲಿ ಓದಲಾದ ಪತ್ರದೊಂದಿಗೆ, ಕರ್ನಾಟಕ ಲೋಕಾಯುಕ್ತ ಕಾಯ್ದೆ, 1984ರ ಕಲಂ 12(3) ರಡಿಯಲ್ಲಿ ಮಾನ್ಯ ಉಪಲೋಕಾಯುಕ್ತರವರು ಮೇಲೆ(1) ರಲ್ಲಿ ಓದಲಾದಂತೆ ನೀಡಿರುವ ವರದಿ ಹಾಗೂ ಇತರ ದಾಖಲೆಗಳನ್ನು ಸರ್ಕಾರಕ್ಕೆ ಕಳುಹಿಸಿ, ಸದರಿ ವರದಿಯಲ್ಲಿನ ಶಿಫಾರಸ್ಸಿನಂತೆ ಕ್ರಮ ಕೈಗೊಂಡು, ಕೈಗೊಂಡ ಕ್ರಮದ ಬಗ್ಗೆ ತಿಳಿಸುವಂತೆ ಕೋರಿರುತ್ತಾರೆ.

ಮಾನ್ಯ ಉಪಲೋಕಾಯುಕ್ತರವರ ವರದಿ ಹಾಗೂ ಇತರೆ ದಾಖಲೆಗಳನ್ನು ಸರ್ಕಾರವು ಪರಿಶೀಲಿಸಿದೆ. ಖಾನಾಪುರ ತಾಲ್ಲೂಕು ಪಂಚಾಯತ್‌ನ ಕಾರ್ಯನಿರ್ವಾಹಕ ಅಧಿಕಾರಿ ಹುದ್ದೆಯಲ್ಲಿ ಈ ಹಿಂದೆ ಕರ್ತವ್ಯ ನಿರ್ವಹಿಸುತ್ತಿದ್ದ ಶ್ರೀ ಬಿ.ಬಿ.ಶೀರ್ಥ, ಇವರ ವಿರುದ್ಧ ಈ ಕೆಳಕಂಡ ಆರೋಪಗಳನ್ನು ಮಾಡುತ್ತಾ, ಶ್ರೀ ಪ್ರಲ್ಹಾದ್ ಕೆ.ರೆಮನಿ, ಮಾನ್ಯ ಶಾಸಕರು ಖಾನಾಪುರ ವಿಧಾನ ಸಭಾ ಕ್ಷೇತ್ರ, ಇವರು ನೀಡಿದ್ದ ದೂರಿನ ಬಗ್ಗೆ ಮಾನ್ಯ ಕರ್ನಾಟಕ ಲೋಕಾಯುಕ್ತ ಕಾಯ್ದೆ ಕಲಂ 9 ರನ್ವಯ ತನಿಖೆಗೆ ಒಳಪಡಿಸಿ, ಕರ್ನಾಟಕ ಲೋಕಾಯುಕ್ತ ಸಂಸ್ಥೆಯ ತಾಂತ್ರಿಕ ವಿಭಾಗದ ಲೆಕ್ಕಾಧೀಕ್ಷಕರು-2 ರವರಿಂದ, ವರದಿಯನ್ನು ಪಡೆಯಲಾಗಿರುತ್ತದೆ ಎಂದು ಮಾನ್ಯ ಉಪಲೋಕಾಯುಕ್ತರ ವರದಿಯಲ್ಲಿ ತಿಳಿಸಲಾಗಿರುತ್ತದೆ.

1. ಎದುರುದಾರರು 2009-10ನೇ ಸಾಲಿನಲ್ಲಿ ಉದ್ಯೋಗ ಖಾತ್ರಿ ಯೋಜನೆಯಡಿ ಕೂಲಿಗಾರರಿಗೆ ಹಣವನ್ನು ಪಾವತಿಸಿರುವುದಿಲ್ಲ.

2. ಕೂಲಿಗಾರರಿಂದ, ಕೆಲಸವನ್ನು ಮಾಡಿಸದೇ ಇದ್ದರೂ ಸಹ ಹೆಚ್ಚಿನ ಹಣವನ್ನು ಗುತ್ತಿಗೆದಾರರಿಗೆ ಪಾವತಿಸಿರುತ್ತಾರೆ.

3. ಕಾಮಗಾರಿಗಳನ್ನು ಮಾಡದೇ ಇದ್ದರೂ ಸಹ ಗುತ್ತಿಗೆದಾರರಿಗೆ ಹಣವನ್ನು ಪಾವತಿಸಿರುತ್ತಾರೆ.

4. ರಾಯಲ್ಟಿ ಮೊತ್ತ ರೂ. 50.ಲಕ್ಷಗಳನ್ನು ಸರ್ಕಾರಕ್ಕೆ ಪಾವತಿಸಿರುವುದಿಲ್ಲ.

5. ಕಚೇರಿಯ ಲೆಕ್ಕಪತ್ರಗಳನ್ನು ಹಾಗೂ ದಾಖಲಾತಿಗಳನ್ನು ನಿರ್ವಹಿಸಿರುವುದಿಲ್ಲ.

ತನಿಖಾಧಿಕಾರಿಯು ನೀಡಿರುವ ವರದಿಯನ್ವಯ ಈ ಕೆಳಕಂಡ ಅಂಶಗಳು ಕಂಡು ಬರುತ್ತದೆ ಎಂದು ಮಾನ್ಯ ಉಪಲೋಕಾಯುಕ್ತರ ವರದಿಯಲ್ಲಿ ನಮೂದಿಸಲಾಗಿರುತ್ತದೆ.

I. An amount of Rs.71,54,007/- has been deducted in the bill of contractor towards Royalty in respect of 51 works executed in 51 Grama Panchayaths of Khanapur Taluk under NREG Scheme during 2009-10 and only an amount of Rs. 36.48.652/- has been credited to the concerned department. Remaining Rs.35.355/- has not been credited.

II. Officers responsible for not crediting the amount are a) H.K.Vantagodi, the then Executive Officer, Taluk Panchayath, Khanapur. He has deducted Rs. 17,13300/- towards royalty and failed to deposit Rs. 11.46.601/- out of that. b) B.B.Theertha the then Executive Officer Taluk Panchayath Khanapur. He has deducted Rs. 54,40,707/- towards royalty and failed to deposit Rs.23,58,754/-.

ತನಿಖಾ ವರದಿಯನ್ನಾಧರಿಸಿ, ಶ್ರೀ ಹೆಚ್.ಕೆ.ಒಂಟಗೂಡಿ, ಇವರನ್ನು ಎದುರುದಾರರು-2 ಎಂದು ಸೇರಿಸಿಕೊಂಡು, ತನಿಖಾ ವರದಿಗೆ ಉತ್ತರವನ್ನು ನೀಡುವಂತೆ ಇಬ್ಬರು ಎದುರುದಾರರುಗಳಿಗೆ ಸೂಚಿಸಲಾಗಿದ್ದು, ಎದುರುದಾರರು-1, ಇವರು ಯಾವುದೇ ಉತ್ತರವನ್ನು ನೀಡಿರುವುದಿಲ್ಲವೆಂದು ಹಾಗೂ ಎದುರುದಾರರು-2, ರವರು ನೀಡಿದ್ದ ಉತ್ತರದಲ್ಲಿ ರಾಯಲ್ಟಿ ಮೊತ್ತವನ್ನು ಕೂಲಿಗಾರರಿಗೆ ಕೂಲಿ ಮೊತ್ತವನ್ನು ಪಾವತಿಸಲು ಉಪಯೋಗಿಸಿಕೊಂಡಿದ್ದು, ರಾಯಲ್ಟಿ ಮೊತ್ತವನ್ನು ಸರ್ಕಾರಕ್ಕೆ

ಜಮಾ ಮಾಡಲಾಗುವುದೆಂದು ತಿಳಿಸಿರುತ್ತಾರೆಂದು ಮಾನ್ಯ ಉಪಲೋಕಾಯುಕ್ತರ ವರದಿಯಲ್ಲಿ ನಮೂದಿಸಿರುತ್ತಾರೆ.

ಎದುರುದಾರರು-2 ರವರು ನೀಡಿದ್ದ ಉತ್ತರವು ಅವರ ವಿರುದ್ಧದ ಆರೋಪಗಳನ್ನು ಕೈಬಿಡಲು ಸಮಂಜಸ/ತೃಪ್ತಿಕರವಾಗಿಲ್ಲದೆ ಇರುವುದರಿಂದ ಹಾಗೂ ಸಂಬಂಧಪಟ್ಟ ದಾಖಲಾತಿ ಮತ್ತು ಸಂಗತಿಗಳನ್ನು ಪರಿಶೀಲಿಸಲಾಗಿ, ಇಬ್ಬರು ಎದುರುದಾರರುಗಳು ಸರ್ಕಾರಿ ನೌಕರರಾಗಿ ಪರಿಪೂರ್ಣ ಪ್ರಾಮಾಣಿಕತೆ, ಸಂಪೂರ್ಣ ಕರ್ತವ್ಯ ನಿಷ್ಠೆ ಮತ್ತು ಸರ್ಕಾರಿ ಸೇವೆಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡು ದುರ್ವರ್ತನೆ/ದುರ್ನಡತೆ ಎಸಗಿರುವುದು ಮೇಲ್ನೋಟಕ್ಕೆ ಕಂಡು ಬಂದಿರುವುದರಿಂದ, ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಾವಳಿಗಳು 1966ರ ನಿಯಮ 3(i)(ii) (iii)ರನ್ನು ಉಲ್ಲಂಘಿಸಿರುವುದರಿಂದ, ಸದರಿ ಅಧಿಕಾರಿಗಳ ವಿರುದ್ಧ ಇಲಾಖಾ ವಿಚಾರಣೆಯನ್ನು ಕೈಗೊಳ್ಳಲು ಪ್ರಕರಣವನ್ನು ತಮಗೆ ಕರ್ನಾಟಕ ನಾಗರೀಕ ಸೇವಾ (ವನಿಮೇ) ನಿಯಮಾವಳಿಗಳು 1957ರ ನಿಯಮ 14(ಎ) ರನ್ವಯ ವಹಿಸಿಕೊಡುವಂತೆ ಮಾನ್ಯ ಉಪಲೋಕಾಯುಕ್ತರು ರವರು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಕಲಂ 12(3) ರನ್ವಯ ಮಾಡಿರುವ ಶಿಫಾರಸ್ಸನ್ನು ಕಳುಹಿಸಿಕೊಡುತ್ತಾ, ಅಂತೆಯೇ ಕ್ರಮವಹಿಸುವಂತೆ ಅಪರ ನಿಬಂಧಕರು, ರವರು ಕೋರಿರುತ್ತಾರೆ.

ಮಾನ್ಯ ಉಪಲೋಕಾಯುಕ್ತರ ವರದಿ ಹಾಗೂ ಶಿಫಾರಸ್ಸು ಅದರೊಂದಿಗಿನ ದಾಖಲಾತಿಗಳನ್ನು ಪರಿಶೀಲಿಸಲಾಗಿ, ಎದುರುದಾರರು 1 ಮತ್ತು 2 ತಮ್ಮ ಕರ್ತವ್ಯ ನಿರ್ವಹಣೆಯಲ್ಲಿ ಲೋಪವೆಸಗಿರುವುದು ಮೇಲ್ನೋಟಕ್ಕೆ ಕಂಡು ಬರುತ್ತದೆ. ಆದುದರಿಂದ, ಮಾನ್ಯ ಉಪಲೋಕಾಯುಕ್ತ-1 ರವರು ಕರ್ನಾಟಕ ಲೋಕಾಯುಕ್ತ ಕಾಯ್ದೆಯ 1984ರ ಕಲಂ 12(3) ರನ್ವಯ, ಮಾಡಿರುವ ಶಿಫಾರಸ್ಸಿನಂತೆ, ಖಾನಾಪೂರ ತಾಲ್ಲೂಕು ಪಂಚಾಯತ್‌ನ ಕಾರ್ಯನಿರ್ವಾಹಕ ಅಧಿಕಾರಿ ಹುದ್ದೆಯಲ್ಲಿ ಈ ಹಿಂದೆ ಕರ್ತವ್ಯ ನಿರ್ವಹಿಸುತ್ತಿದ್ದ ಶ್ರೀ ಬಿ.ಬಿ.ತೀರ್ಥ, ಹಾಗೂ ಶ್ರೀ ಹೆಚ್.ಕೆ.ಒಂಟಗೋಡಿ, ಇವರುಗಳ ವಿರುದ್ಧದ ಆರೋಪಗಳ ಸಂಬಂಧ ವಿವರವಾದ ಇಲಾಖಾ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ (ವನಿಮೇ) ನಿಯಮಾವಳಿಗಳು 1957ರ ನಿಯಮ 11 ರನ್ವಯ ಜರುಗಿಸಲು ಪ್ರಕರಣವನ್ನು ಅದೇ ನಿಯಮಾವಳಿಗಳ ನಿಯಮ 14(ಎ) ರನ್ವಯ ಮಾನ್ಯ ಉಪಲೋಕಾಯುಕ್ತ-1 ರವರಿಗೆ ವಹಿಸಲು ಸರ್ಕಾರವು ತೀರ್ಮಾನಿಸಿದೆ. ಆದುದರಿಂದ, ಈ ಕೆಳಕಂಡ ಆದೇಶ.

**<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 212 ವಿಸೇಬಿ 2016 ಬೆಂಗಳೂರು ದಿನಾಂಕ:14-11-2016</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಮೇರೆಗೆ, ಖಾನಾಪೂರ ತಾಲ್ಲೂಕು ಪಂಚಾಯತ್‌ನ ಕಾರ್ಯನಿರ್ವಾಹಕ ಅಧಿಕಾರಿ ಹುದ್ದೆಯಲ್ಲಿ ಈ ಹಿಂದೆ ಕರ್ತವ್ಯ ನಿರ್ವಹಿಸುತ್ತಿದ್ದ ಶ್ರೀ ಬಿ.ಬಿ.ತೀರ್ಥ,

ಹಾಗೂ ಶ್ರೀ ಹೆಚ್.ಕೆ.ವೆಂಟಗೋಡಿ, ಇವರುಗಳ ವಿರುದ್ಧದ ಆರೋಪಗಳ ಸಂಬಂಧ ಕರ್ನಾಟಕ ನಾಗರೀಕ ಸೇವಾ (ವನಿಮೇ) ನಿಯಮಾವಳಿಗಳು 1957ರ ನಿಯಮ 11 ಮತ್ತು 11(ಎ) ರನ್ವಯ ಸಮಗ್ರವಾದ ಇಲಾಖಾ ವಿಚಾರಣೆಯನ್ನು ನಡೆಸಲು ಪ್ರಕರಣವನ್ನು ಅದೇ ನಿಯಮಾವಳಿಗಳ ನಿಯಮ-14(ಎ)ರ ಪ್ರಕಾರ ಮಾನ್ಯ ಉಪಲೋಕಾಯುಕ್ತರು-1, ಕರ್ನಾಟಕ ಲೋಕಾಯುಕ್ತ ರವರಿಗೆ ವಹಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು
ಅವರ ಹೆಸರಿನಲ್ಲಿ

14/11/2016

(ಎಸ್.ರಂಗನಗೌಡ)
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಬಿ&ಸಿ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಇವರಿಗೆ,**

1) ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2) ಮಾನ್ಯ ಉಪಲೋಕಾಯುಕ್ತರು-1 ಕರ್ನಾಟಕ ಲೋಕಾಯುಕ್ತ, ಬೆಂಗಳೂರು
3) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಲೋಕೋಪಯೋಗ ಇಲಾಖೆ, ವಿಕಾಸಸೌಧ, ಬೆಂಗಳೂರು.
4) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಜಿಲ್ಲಾ ಪಂಚಾಯತ್ ಬೆಳಗಾವಿ.
5) ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು-01.
6) ಸರ್ಕಾರದ ಅಧೀನ ಕಾರ್ಯದರ್ಶಿ, (ಸೇವೆಗಳು-ಎ) ಲೋಕೋಪಯೋಗಿ ಇಲಾಖೆ, ವಿಕಾಸ ಸೌಧ ಬೆಂಗಳೂರು.
7) ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಎ) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

**ಪ್ರತಿ ಮಾಹಿತಿಗಾಗಿ:**

5) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು
6) ಸರ್ಕಾರದ ಪ್ರಧಾನ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ (ಪಂ.ರಾಜ್)/ ಜಂಟಿ ಕಾರ್ಯದರ್ಶಿ (ಆಡಳಿತ-2) ರವರ ಆಪ್ತ ಶಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ.
7) ಮೇಲ್ವಿಚಾರಕರು, ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ.
8) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.